<u>1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ</u>

<u>Spl.C.150/2023</u>

ದಿಃ 06.07.2024
(ಸಾಕ್ಷಿಗೆ ಪ್ರಮಾಣವಚನವನ್ನು ಬೋಧಿಸಲಾಯಿತು)

Cw-5 Pw-5

| | | |
|---|---|---|
| ಹೆಸರು | ಃ | ನಾಗೇಶ |
| ತಂದೆಯ ಹೆಸರು | ಃ | ಕರಿಯಪ್ಪ |
| ವಯಸ್ಸು | ಃ | 40 ವರ್ಷ |
| ಉದ್ಯೋಗ | ಃ | ವ್ಯವಸಾಯ |
| ವಾಸಸ್ಥಳ | ಃ | ವಾಡೆದೊಡ್ಡಿ |

<u>ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ</u>

1. ಈಗ ಸುಮಾರು 10 ತಿಂಗಳುಗಳ ಹಿಂದೆ ನಾನು ನನ್ನ ಗೆಳೆಯನೊಂದಿಗೆ ಕನಕಪುರದ ಪೊಲೀಸ್ ಠಾಣೆಗೆ ಹೋಗಿದ್ದಾಗ ಪೊಲೀಸರು ಒಂದು ದಸ್ತಾವೇಜಿನ ಮೇಲೆ ನನ್ನ ಸಹಿಯನ್ನು ಪಡೆದಿರುತ್ತಾರೆ.

2. ಸದರಿ ದಸ್ತಾವೇಜನ್ನು ಈಗ ನೋಡಿ ಗುರುತಿಸುತ್ತಿದ್ದು, ಅದನ್ನು ಈಗಾಗಲೇ ನಿ.ಪಿ.2 ಎಂದು ಗುರುತಿಸಲಾಗಿದ್ದು, ಅದರ ಮೇಲಿರುವ ನನ್ನ ಸಹಿಯನ್ನು ಈಗ ನಿ.ಪಿ.2(ಬಿ) ಎಂದು ಗುರುತಿಸಲಾಯಿತು.

3. ಅದೇ ಸಮಯದಲ್ಲಿ ಎರಡು ವರ್ಣರಂಜಿತ ಛಾಯಾಚಿತ್ರಗಳನ್ನು ತೆಗೆಸಿದ್ದು ಅವುಗಳನ್ನು ಈಗ ನೋಡಿ ಗುರುತಿಸುತ್ತಿದ್ದು, ಅವುಗಳನ್ನು ಈಗಾಗಲೇ ನಿ.ಪಿ.3 ಮತ್ತು 4 ಎಂದು ಗುರುತಿಸಿದ್ದು ಇರುತ್ತವೆ.

4. ನಿ.ಪಿ.3 ಮತ್ತು 4ಗಳನ್ನು ಯಾವ ಕಾರಣಕ್ಕೆ ತೆಗೆಸಿರುತ್ತಾರೆ ಎಂಬುದು ನನಗೆ ಮಾಹಿತಿ ಇರುವುದಿಲ್ಲ.

5. ನಿ.ಪಿ.2ರಲ್ಲಿ ಏನು ಬರೆದಿದೆ ಎಂಬುದೂ ಸಹ ನನಗೆ ಮಾಹಿತಿ ಇರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅಭಿಯೋಜಕರು ಕೋರಿದ್ದಾರೆ. ಅದರಂತೆ ಸಾಕ್ಷಿಯನ್ನು ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅಭಿಯೋಜಕರಿಗೆ ಅನುಮತಿ ನೀಡಲಾಗಿದೆ)**

ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ

6. ಈಗ ನನಗೆ ಓದಿ ಹೇಳಿದ ನಿ.ಪಿ.2ರಂತೆ ದಿಃ13.08.2023ರಂದು ಬೆಳಿಗ್ಗೆ 11.00ರಿಂದ 11.45ರವರೆಗೆ ಚಾಸಾ.1 ಇವಳ ತೋರಿಕೆಯ ಮೇರೆಗೆ ಅವಳ ಮನೆಯ ಪಕ್ಕದಲ್ಲಿ ಇರುವ ಖಾಲಿ ಜಾಗದ ಹತ್ತಿರ ಪೊಲೀಸರು ಘಟನಾ ಸ್ಥಳವೆಂದು ಭೇಟಿ ನೀಡಿ, ಒಂದು ಸ್ಥಳ ಪಂಚನಾಮೆ ಮಾಡಿ, ಅದರ ಮೇಲೆ ನನ್ನ ಸಹಿಯನ್ನು ಪಡೆದಿರುತ್ತಾರೆ ಎಂದು ಸೂಚಿಸುವುದು ಸರಿಯಲ್ಲ.

7. ಈಗ ಆರೋಪಿತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎನ್ನುವುದು ಸರಿಯಲ್ಲ.

ಪಾಟೀ ಸವಾಲುಃ ಶ್ರೀ. ಡಿ.ಆರ್.ಜೆ., ವಕೀಲರಿಂದ ಆರೋಪಿಯ ಪರವಾಗಿಃ ಏನೂ ಇಲ್ಲವೆಂದು ತಿಳಿಸಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ

(ಜಿ ಡಿ ಮಹಾವರ್ಕರ್)
1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು/
ವಿಶೇಷ ನ್ಯಾಯಾಧೀಶರು,
ರಾಮನಗರ.